ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1288
ಸದಸ್ಯರ ಹೆಸರು : ಶ್ರೀ ಬಿ. ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ : 24-12-2021.
ಉತ್ತರಿಸುವವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

ಕ್ರ.ಸಂ	ಪ್ರಶ್ನೆ	ಉತ್ತರ
(ಅ)	ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಗ್ರಾಮ ಪಂಚಾಯತಿ ಸದಸ್ಯರು ಪಂಚಾಯತಿಗೆ ಮೀಸಲಿಟ್ಟಂತಹ ಅನುದಾನದಲ್ಲಿ ಕನಿಷ್ಠ ಅನುದಾನ ನೀಡುವ ಅಧಿಕಾರವನ್ನು ಸದಸ್ಯರಿಗೆ ನೀಡುವ ಉದ್ದೇಶ ಸರ್ಕಾರಕ್ಕೆ ಇದೆಯೇ; (ಸಂಪೂರ್ಣ ವಿವರ ನೀಡುವುದು)	ಇಂತಹ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ.
(ಆ)	ಗ್ರಾಮ ಪಂಚಾಯತಿ ಸದಸ್ಯರುಗಳಿಗೆ ಗುರುತಿನ ಚೀಟಿ, ಪಿಂಚಣಿ ವ್ಯವಸ್ಥೆ ಮತ್ತು ಗ್ರಾಮ ಪಂಚಾಯತಿಯ ಅಭಿವೃದ್ಧಿಗಾಗಿ ಅಧ್ಯಯನ ಪ್ರವಾಸ ಕಲ್ಪಿಸಲು ಸರ್ಕಾರದ ಮಟ್ಟದಲ್ಲಿ ಚಿಂತನೆ ನಡೆದಿದೆಯೇ;	3 ಹಂತದ ಪಂಚಾಯತ್ ರಾಜ್ ವ್ಯವಸ್ಥೆಯಲ್ಲಿ ಚುನಾಯಿತ ಪ್ರತಿನಿಧಿಗಳಿಗೆ ಪಿಂಚಣಿ ನೀಡುವ ಕುರಿತು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರಲ್ಲಿ ಅವಕಾಶವಿರುವುದಿಲ್ಲ. ಗ್ರಾಮ ಪಂಚಾಯತಿ ಸದಸ್ಯರುಗಳಿಗೆ ಗುರುತಿನ ಚೀಟಿ ಹಾಗೂ ಗ್ರಾಮ ಪಂಚಾಯತಿಯ ಅಭಿವೃದ್ಧಿಗಾಗಿ ಅಧ್ಯಯನ ಪ್ರವಾಸ ಕಲ್ಪಿಸುವ ಕುರಿತು ಸರ್ಕಾರದ ಮಟ್ಟದಲ್ಲಿ ಯಾವುದೇ ಪ್ರಸ್ತಾವನೆಯಿರುವುದಿಲ್ಲ.
(ಇ)	ನಡೆದಿದ್ದಲ್ಲಿ, ಸದಸ್ಯರಿಗೆ ಮೇಲ್ಕಂಡ ಸೌಲಭ್ಯಗಳನ್ನು ಎಂದಿನಿಂದ ಜಾರಿಗೆ ತರಲು ಸರ್ಕಾರ ಮುಂದಾಗುವುದು? (ವಿವರ ನೀಡುವುದು)	ಉದ್ಭವಿಸುವುದಿಲ್ಲ.

ಸಂಖ್ಯೆ: ಗ್ರಾಅಪ 465 ಗ್ರಾಪಂಅ 2021

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.